**Akashvani : Bangalore**
**Regional Bulletin In Kannada**
**05.07.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**05.07.2024 / 14.30 hrs**
**<><*<><>*><>**

ಮುಖ್ಯಾಂಶಗಳು

**೧. ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಮೀಸಲಾದ ಮೊತ್ತವನ್ನು ಕಾಲಮಿತಿಯಲ್ಲಿ ವೆಚ್ಚ ಮಾಡದ ಅಧಿಕಾರಿಗಳ ವಿರುದ್ಧ ಕ್ರಮ - ಮುಖ್ಯಮಂತ್ರಿ ಎಚ್ಚರಿಕೆ**

**೨. ಹಲವು ಜಿಲ್ಲೆಗಳಲ್ಲಿ ಮಳೆ - ನೆರೆ ಪರಿಸ್ಥಿತಿ ನಿರ್ವಹಣೆಗೆ ಜಿಲ್ಲಾಡಳಿತಗಳಿಂದ ಸಿದ್ಧತೆ.**

**೩. ತಮ್ಮ ಇಲಾಖೆಯ ವಿವಿಧ ಯೋಜನೆಗಳಿಗೆ ಶೀಘ್ರದಲ್ಲೇ ನೀಲನಕ್ಷೆ ಸಿದ್ಧ - ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ**

**೪. ಹಾಸನ ಜಿಲ್ಲೆ ಯಸಳೂರು ಅರಣ್ಯದಲ್ಲಿ ಅರ್ಜುನ ದಸರಾ ಆನೆ ಸ್ಮಾರಕ ನಿರ್ಮಾಣಕ್ಕೆ ನಾಳೆ ಶಂಕುಸ್ಥಾಪನೆ.**

**<><*<><>*><>**

ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಕ್ಕೆ ಶಾಸನ ಬದ್ಧವಾಗಿ ರಾಜ್ಯ ಮುಂಗಡ ಪತ್ರದಲ್ಲಿ ನಿಗದಿ ಮಾಡಿರುವ ಮೊತ್ತವನ್ನು ಕಾಲಮಿತಿಯಲ್ಲಿ ವೆಚ್ಚ ಮಾಡದಿದ್ದರೆ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಮಾತನಾಡಿದ ಅವರು, ಶೋಷಿತ ಸಮುದಾಯಗಳಿಗೆ ಈ ಬಾರಿ ಶೇಕಡ ೧೧ರಷ್ಟು ಹೆಚ್ಚಿನ ಮೊತ್ತವನ್ನು ನಿಗದಿ ಮಾಡಲಾಗಿದೆ. ಕಳೆದ ವರ್ಷ ೩೫ ಸಾವಿರದ ೨೨೧ ಕೋಟಿ ರೂಪಾಯಿ ನಿಗದಿ ಮಾಡಲಾಗಿತ್ತು. ಶೇಕಡ ೯೭.೨೩ರಷ್ಟು ಮೊತ್ತ ಬಿಡುಗಡೆಯಾಗಿದ್ದು, ಶೇಕಡ ೯೯.೬೪ರಷ್ಟು ಸಾಧನೆಯಾಗಿದೆ ಎಂದು ಹೇಳಿದರು. ಪರಿಶಿಷ್ಠ ಜಾತಿಗಳ ಉಪಯೋಜನೆ ಎಸ್‌ಸಿ ಎಸ್‌ಟಿ ಮತ್ತು ಬುಡಕಟ್ಟುಗಳ ಸಮುದಾಯಗಳ ಉಪಯೋಜನೆ ಟಿಎಸ್‌ಪಿ ಕಾಯ್ದೆಯನ್ನು ದೇಶದಲ್ಲಿ ಹೊಂದಿರುವ ಹೆಗ್ಗಳಿಕೆಗೆ ನಮ್ಮ ರಾಜ್ಯ ಪಾತ್ರವಾಗಿದೆ. ಈ ಸಮುದಾಯಗಳ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ನೀಡಲಾಗುತ್ತಿದೆ. ಮಂಜೂರಾದ ಮೊತ್ತವನ್ನು ಆಯಾ ವರ್ಷವೇ ಶೇಕಡ ೧೦೦ರಷ್ಟು ವೆಚ್ಚ ಮಾಡಬೇಕು ಎನ್ನುವ ಕಾನೂನನ್ನು ಸಹ ನಮ್ಮ ರಾಜ್ಯದಲ್ಲಿ ಮಾತ್ರ ರೂಪಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಅಧಿಕಾರಗಳ ಮೇಲೆ ಕ್ರಮಕೈಗೊಳ್ಳಬೇಕು ಎನ್ನುವ ನಿಯಮವನ್ನೂ ಜಾರಿಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರು, ಶಾಸಕರು ಸಭೆಯಲ್ಲಿ ಉಪಸ್ಥಿತರಿದ್ದರು.

**<><*<><>*><>**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆಯ ಅಬ್ಬರ ಮುಂದುವರೆದಿದ್ದು, ನದಿ, ಕೆರೆ, ಹಳ್ಳಗಳು ಉಕ್ಕಿ ಹರಿಯುತ್ತಿವೆ. ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಮುಂಗಾರು ಮಳೆಯಿಂದ ಕೃಷಿ ಚಟುವಟಿಕೆ

ಚುರುಕುಗೊಂಡಿದೆ.  ನೆರೆ ರಾಜ್ಯ ಮಹಾರಾಷ್ಟ್ರದ ಘಟ್ಟ ಪ್ರದೇಶದಲ್ಲಿ ಸತತ ಮಳೆಯಾಗುತ್ತಿದ್ದು, ಕೃಷ್ಣಾ ನದಿ ಸೇರಿದಂತೆ ಜಿಲ್ಲೆಯ ಎಲ್ಲಾ ನದಿಗಳು ತುಂಬಿ ಹರಿಯುತ್ತಿವೆ. ದೂಧ್ ಗಂಗಾ, ವೇದ್ ಗಂಗಾ, ಪಂಚಗಂಗಾ, ಘಟಪ್ರಭಾ, ಮಲಪ್ರಭಾ, ಮಾರ್ಕಂಡೇಯ ನದಿಗಳಿಗೆ ಒಳ ಅರಿವು ಹೆಚ್ಚಾಗಿದೆ. ಜಿಲ್ಲಾಡಳಿತ ಮಳೆ ಪರಿಸ್ಥಿತಿಯನ್ನು ನಿರಂತರ ಗಮನಿಸುತ್ತಿದ್ದು, ಸಂಭವನೀಯ ಪ್ರವಾಹ ಎದುರಿಸಲು ಸಜ್ಜಾಗುತ್ತಿದೆ. ಚಿಕ್ಕೋಡಿ ಉಪವಿಭಾಗ ಅಧಿಕಾರಿ ಸುಭಾಷ್ ಸಂಪಗಾವೆ, ಮಾಹಿತಿ ನೀಡಿದ್ದು ಪ್ರವಾಹದ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ, ಕಾಳಮ್ಮ ವಾಡಿ ಡ್ಯಾಮ್, ಕೊಯ್ನಾ ಡ್ಯಾಮ್ ಮತ್ತು ವಾರ್ನಾ ಡ್ಯಾಮ್ ನಿಂದ ನೀರು ಬಿಡಲಾಗಿದ್ದು, ಕೃಷ್ಣಾ ನದಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಎಚ್ಚರಿಕೆ ವಹಿಸಲಾಗಿದೆ, ಎನ್.ಡಿ.ಆರ್.ಎಫ್ ತಂಡವನ್ನು ಸಹ ನಿಯೋಜನೆ ಮಾಡಲಾಗಿದ್ದು, ದೋಣಿ ವ್ಯವಸ್ಥೆ ಕಲ್ಪಿಸಿಲಾಗಿದೆ ಎಂದು ತಿಳಿಸಿದ್ದಾರೆ. ಈ ಕುರಿತು ನಮ್ಮ ಜಿಲ್ಲಾ ಪ್ರತಿನಿಧಿಯ ವರದಿ.

**ಧ್ವನಿ : ಬೆಳಗಾವಿ ಪಿಟಿಸಿ**

ಉತ್ತರ ಕನ್ನಡ ಜಿಲ್ಲೆಯಲ್ಲಿ ತೀವ್ರ ಮಳೆಯಿಂದ ತೊಂದರೆಗೊಳಗಾಗಿರುವ ಹೊನ್ನಾವರ, ಕುಮಟ ಮತ್ತು ಅಂಕೋಲ ತಾಲೂಕು ವ್ಯಾಪ್ತಿಯ ಹಲವು ಗ್ರಾಮಗಳ ಸಾರ್ವಜನಿಕರನ್ನು ಸುರಕ್ಷಿತ ಜಾಗಗಳಿಗೆ ಸ್ಥಳಾಂತರಿಸಲಾಗಿದೆ. ಅವರ ಅನುಕೂಲಕ್ಕಾಗಿ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ್ ತಿಳಿಸಿದ್ದಾರೆ.  ಕಾರವಾರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಎರಡು ದಿನಗಳಿಂದ ನಿರಂತರ ಮಳೆಯಾಗುತ್ತಿದೆ. ಹೊನ್ನಾವರದಲ್ಲಿ ೪, ಕುಮಟಾದಲ್ಲಿ ೨, ಅಂಕೋಲಾದಲ್ಲಿ ಒಂದು ಸೇರಿದಂತೆ ಒಟ್ಟು ೭ ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದ್ದು, ೧೩೦ಕ್ಕೂ ಹೆಚ್ಚು ಮಳೆ ಸಂತ್ರಸ್ತರಿಗೆ ಆಶ್ರಯ ಕಲ್ಪಿಸಲಾಗಿದೆ ಎಂದರು.  ಅಗತ್ಯಬಿದ್ದರೆ ಇನ್ನೂ ಕೆಲವು ಕಾಳಜಿ ಕೇಂದ್ರಗಳನ್ನು ತೆರೆಯುವಂತೆ ಸಂಬಂಧಿತ ತಾಲೂಕುಗಳ ತಹಸೀಲ್ದಾರ್‌ಗಳಿಗೆ ಸೂಚಿಸಿರುವುದಾಗಿ ಅವರು ಹೇಳಿದ್ದಾರೆ. ಕುರಿತು ನಮ್ಮ ಜಿಲ್ಲಾ ಪ್ರತಿನಿಧಿ ಕಳುಹಿಸಿರುವ ವರದಿ

**ಧ್ವನಿ ಉತ್ತರ ಕನ್ನಡ ಪಿಟಿಸಿ**

ಮಂಡ್ಯ ಜಿಲ್ಲೆಯ ಜೀವನಾಡಿ, ಕಾವೇರಿ ಕಣಿವೆಯ ಆಸುಪಾಸಿನಲ್ಲಿ ವ್ಯಾಪಕ ಮಳೆಯಾಗುತ್ತಿದ್ದು, ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ೧೦೦ ಅಡಿ ದಾಟಿದೆ. ಇಂದು ಬೆಳಗ್ಗೆ ನೀರಿನ ಮಟ್ಟ ೧೦೦.೩೦ ಅಡಿಗೆ ನೀರು ತಲುಪಿದೆ. ಜಲಾಶಾಯಕ್ಕೆ ೯ ಸಾವಿರದ ೭೮೭ ಕ್ಯೂಸೆಕ್ ಒಳ ಹರಿವು ಇದ್ದು, ೫೪೭ ಕ್ಯೂಸೆಕ್ ನೀರನ್ನು ಜಲಾಶಾಯದಿಂದ ಹೊರ ಬಿಡಲಾಗುತ್ತಿದೆ ಎಂದು ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಕರಾವಳಿ ಜಿಲ್ಲೆಗಳಿಗೆ ಇಂದು ಭಾರೀ ಮಳೆಯ ಮುನ್ಸೂಚನೆ ನೀಡಲಾಗಿದೆ.  ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳ ಹಲವೆಡೆ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಿಗೂ ಮಳೆಯ ಮುನ್ಸೂಚನೆ ನೀಡಲಾಗಿದೆ. ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೊಡಗು, ಹಾಸನ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು, ವಿಜಯನಗರ

ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಜೋರು ಗಾಳಿಯೊಂದಿಗೆ ಮಳೆಯಾಗಲಿದೆ ಎಂದು ರಾಜ್ಯ ಹವಾಮಾನ ಕೇಂದ್ರ ಮಾಹಿತಿ ನೀಡಿದೆ.

<><*<><>*><>

ಭದ್ರಾವತಿಯ ಉಕ್ಕು ಕಾರ್ಖಾನೆ, ತುಮಕೂರಿನ ಎಚ್‌ಎಂಟಿ ಕಾರ್ಖಾನೆಗಳನ್ನು ಮತ್ತೆ ಆರಂಭಿಸಲು ತಮ್ಮ ಇಲಾಖೆ ಗಮನ ನೀಡಲಿದೆ. ಎಚ್‌ಎಂಟಿಯ ಹರಿಯಾಣ ಘಟಕಕ್ಕೂ ಭೇಟಿ ನೀಡಿ, ಸಮಸ್ಯೆಗಳನ್ನು ಪರಿಶೀಲಿಸಲಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶಾದ್ಯಂತ ಹಲವು ಉದ್ಯಮಗಳು ನಶಿಸಿ ಹೋಗುವ ಹಂತದಲ್ಲಿದ್ದು, ಅವುಗಳ ಪುನಶ್ಚೇತನಕ್ಕೆ ಒತ್ತು ನೀಡಲಾಗುವುದು ಮುಂದಿನ ಎರಡು ದಿನಗಳಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿ, ವಿವಿಧ ಯೋಜನೆಗಳಿಗೆ ನೀಲನಕ್ಷೆ ಸಿದ್ಧಪಡಿಸಲಾಗುವುದು ಎಂದರು. ಇದಕ್ಕೂ ಮುನ್ನ ಸಚಿವರು, ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಜನವರಿಯಿಂದ ಇದುವರೆಗೆ ಒಟ್ಟು ೨೬೩ ಪ್ರಕರಣಗಳು ಪತ್ತೆಯಾಗಿವೆ. ಡೆಂಗ್ಯೂ ತಡೆಗಟ್ಟುವಲ್ಲಿ ಆರೋಗ್ಯ ಇಲಾಖೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಕಾರ್ಯಕ್ರಮ ಒಂದರಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯ ಇಲಾಖೆ ವತಿಯಿಂದ ವಾರಕ್ಕೆ ಒಂದು ದಿನ ಪ್ರತಿ ಶುಕ್ರವಾರ "ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಮಾಡುವ ದಿನ" ಕಾರ್ಯಕ್ರಮ ನಡೆಯುತ್ತಿದೆ ಎಂದರು. ಮುನ್ನೆಚ್ಚರಿಕಾ ಕ್ರಮವಾಗಿ ಮಂಗಳೂರು ಜಿಲ್ಲಾ ವೆನ್ಲಾಕ್ ಸರಕಾರಿ ಆಸ್ಪತ್ರೆಯಲ್ಲಿ ಡೆಂಘೆ ಚಿಕಿತ್ಸೆಗೆ ವಿಶೇಷ ವಾರ್ಡ್ ಮೀಸಲಿಡಲಾಗಿದೆ. ೧೫ ಹಾಸಿಗೆಯ ಸಾಮಾನ್ಯ ವಾರ್ಡ್ ಮತ್ತು ೮ ಹಾಸಿಗೆಯ ವೆಂಟಿಲೇಟರ್ ವಾರ್ಡ್ ವ್ಯವಸ್ಥೆ ಮಾಡಲಾಗಿದೆ. ತಾಲೂಕು ಮಟ್ಟದಲ್ಲೂ ನಿಗಾ ವಹಿಸಲಾಗುತ್ತಿದೆ ಎಂದು ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ನವೀನ್ ಚಂದ್ರ ಕುಲಾಲ್ ಮಾಹಿತಿ ನೀಡಿದರು.

<><*<><>*><>

ಹಾಸನ ಜಿಲ್ಲೆ ಯಸಳೂರು ಅರಣ್ಯ ವಲಯದಲ್ಲಿ ಕಳೆದ ವರ್ಷ ಕಾಡಾನೆ ಸೆರೆ ಕಾರ್ಯಾಚರಣೆಯ ವೇಳೆ ಮೃತಪಟ್ಟಿದ್ದ ಅರ್ಜುನ ದಸರಾ ಆನೆಯ ಸ್ಮಾರಕ ನಿರ್ಮಾಣಕ್ಕೆ ನಾಳೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಅರಣ್ಯ ಜೀವಿ ಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಈ ಬಗ್ಗೆ ಕೆಲ ದಿನಗಳ ಹಿಂದೆ ಸರ್ಕಾರ ಘೋಷಣೆ ನೀಡಿತ್ತು. ಅರ್ಜುನ ಆನೆ ಕಾಡಾನೆ ದಾಳಿಯಿಂದ ಅಸುನೀಗಿದ್ದ ಡಬ್ಬಲಿಕಟ್ಟೆ ನೆಡುತೋಪಿನಲ್ಲಿ ಸ್ಮಾರಕ ನಿರ್ಮಿಸಲಾಗುವುದು ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಜುನ ಆನೆಯನ್ನು ಇರಿಸಲಾಗಿದ್ದ ನಾಗರಹೊಳೆ ಅರಣ್ಯ ವ್ಯಾಪ್ತಿಯ ಬಳ್ಳೆಯಲ್ಲಿ ಸ್ಮಾರಕ ನಿರ್ಮಾಣಕ್ಕೆ ಸದ್ಯದಲ್ಲೇ ಶಂಕುಸ್ಥಾಪನೆ ನೆರವೇರಿಸಲಾಗುವುದು. ಈಗ ಹೇಳಿದ ಎರಡೂ ಸ್ಥಳಗಳಲ್ಲಿ ಅರ್ಜುನ ಆನೆಯ ಪ್ರತಿಕೃತಿಯನ್ನು ಪ್ರತಿಷ್ಠಾಪಿಸಲಾಗುವುದು. ಜೊತೆಗೆ ೮ ಬಾರಿ ಚಿನ್ನದ ಅಂಬಾರಿ ಹೊತ್ತಿದ್ದ ಅರ್ಜುನ ಆನೆಯ ಚಿತ್ರಗಳು ಮತ್ತು ಅದು

ಪಾಲ್ಗೊಂಡ ಹಲವು ಕಾರ್ಯಾಚರಣೆಯ ಚಿತ್ರಗಳನ್ನು ಪ್ರದರ್ಶಿಸಲಾಗುವುದು ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

**<><*<><>*><>**

ಕೊಡಗು ಜಿಲ್ಲೆ ಮಡಿಕೇರಿಯ ಜಿಲ್ಲಾ ಆಸ್ಪತ್ರೆಯಲ್ಲಿ ನೂತನ ಎಂ ಆರ್ ಐ ವ್ಯವಸ್ಥೆ ಪ್ರಾರಂಭಿಸಲು ಸರ್ಕಾರ ಮುಂದಾಗಿದ್ದು ೪೫ ದಿನಗಳಲ್ಲಿ ಈ ಸೇವೆ ಜನರಿಗೆ ಲಭ್ಯವಾಗಿದೆ ಎಂದು ರಾಜ್ಯ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ, ಶರಣ ಪ್ರಕಾಶ ಪಾಟೀಲ ಹೇಳಿದ್ದಾರೆ, ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಆಸ್ಪತ್ರೆಯಲ್ಲಿ ಕಾಮಗಾರಿ ಅಪೂರ್ಣವಾಗಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯನ್ನು ೫೫ ಕೋಟಿ ರುಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತದೆ, ೩೦೦ ಹಾಸಿಗೆಗಳ ಆಸ್ಪತ್ರೆಯನ್ನೂ ಪ್ರಾರಂಭಿಸಲಾಗುತ್ತದೆ ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**